ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ಕೊಡಗು ಜಿಲ್ಲೆಯಲ್ಲಿ ಭೂಪರಿವರ್ತನೆಯ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

604 (614) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯಲ್ಲಿ 2018ರಿಂದೀಚೆಗೆ ವಾಣಿಜ್ಯ ಉದ್ದೇಶಕ್ಕೆ ಭೂಪರಿವರ್ತನೆ ಮಾಡದಂತೆ ನಿರ್ಬಂಧ ವಿಧಿಸಲಾಗಿತ್ತೇ ;

(ಆ) ಹಾಗಿದ್ದಲ್ಲಿ, ಕೊಡಗು ಜಿಲ್ಲೆಯಂತೆ ರಾಜ್ಯದ ಯಾವ ಯಾವ ಜಿಲ್ಲೆಗಳಿಗೆ ಈ ನಿರ್ಬಂಧವನ್ನು ವಿಧಿಸಲಾಗಿತ್ತು ; (ಮಾಹಿತಿ ನೀಡುವುದು)

(ಇ) ಈ ನಿರ್ಬಂಧವನ್ನು ಎಷ್ಟು ಎಕರೆ/ಸೆಂಟ್ಸ್‌ವರೆಗೆ ಭೂಪರಿವರ್ತನೆ ಮಾಡಬಾರದೆಂದು ವಿಧಿಸಲಾಗಿತ್ತು ; (ಆದೇಶದ ಪ್ರತಿಯನ್ನು ಒದಗಿಸುವುದು)

(ಈ) ವಿಧಿಸಿದ ಭೂಪರಿವರ್ತನೆಯ ನಿರ್ಬಂಧವನ್ನು ಹಿಂಪಡೆಯಲಾಗಿದೆಯೇ ; ಹಾಗಿದ್ದಲ್ಲಿ, ವಸತಿ ಮತ್ತು ಇನ್ನಿತರ ಉದ್ದೇಶಗಳಿಗೆ ಎಷ್ಟು ಎಕರೆ ಭೂಪರಿವರ್ತನೆ ಮಾಡಲು ಷರತ್ತು ವಿಧಿಸಲಾಗಿದೆ ? (ವಿವರಣೆಯೊಂದಿಗೆ ಆದೇಶದ ಪ್ರತಿಯನ್ನು ಒದಗಿಸುವುದು)